ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಕರ್ನಾಟಕದಿಂದ ಗೋವಾಕ್ಕೆ ವಿದ್ಯುತ್ ಲೈನ್ ಎಳೆಯುವ ವಿಷಯದ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1491 (1778) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗೋವಾ ಸರ್ಕಾರವು ಧಾರವಾಡ ಸಮೀಪದ ನರೇಂದ್ರದಿಂದ ಗೋವಾಕ್ಕೆ ವಿದ್ಯುತ್ ಲೈನ್ ಎಳೆಯಲು ಬೆಳಗಾವಿ, ಧಾರವಾಡ, ಉತ್ತರ ಕನ್ನಡವೂ ಸೇರಿದಂತೆ ರಾಜ್ಯದ ಮೂರು ಜಿಲ್ಲೆಗಳ ಅರಣ್ಯ ಭೂಮಿಯ ಪರಿವರ್ತನೆಗಾಗಿ ಕೇಂದ್ರ ಅರಣ್ಯ ಸಚಿವಾಲಯಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅನ್ಯ ರಾಜ್ಯದ ಪ್ರಯೋಜನಕ್ಕಾಗಿ ನಮ್ಮ ರಾಜ್ಯದ ಅರಣ್ಯ ಸಂಪತ್ತು ನಾಶ ಮಾಡುವುದಕ್ಕೆ ಈಗಾಗಲೇ ಪರಿಸರವಾದಿಗಳು ವಿರೋಧ ವ್ಯಕ್ತಪಡಿಸುತ್ತಿದ್ದು, ಇದರ ಕುರಿತು ಸರ್ಕಾರದ ನಿಲುವೇನು ;

(ಇ) ಉತ್ತರ ಕನ್ನಡದ ದಾಂಡೇಲಿ ಆನೆಧಾಮ, ದಾಂಡೇಲಿ ವನ್ಯಜೀವಿ ಸುರಕ್ಷಿತ ವಲಯ ಹಾಗೂ ಬೆಳಗಾವಿ ಜಿಲ್ಲೆಯ ಭೀಮಗಡದ ಪರಿಸರ ಸೂಕ್ಷ್ಮ ವಲಯದ ಮೂಲಕ ಪ್ರಸ್ತಾಪಿತ ವಿದ್ಯುತ್ ಲೈನ್ ಹಾದು ಹೋಗುತ್ತಿದ್ದು, ಇದರಿಂದ ಪರಿಸರಕ್ಕೆ ಧಕ್ಕೆಯುಂಟಾಗುತ್ತಿದ್ದು, ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಅರಣ್ಯ ನಾಶದ ಭೀತಿ ಇರುವ ಸದರಿ ಮಾರ್ಗದ ಬದಲು ಗೋವಾ ಸರ್ಕಾರ ಬದಲಿ ಮಾರ್ಗದ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವಂತೆ ಮಾಡಲು ಗೋವಾ ಸರ್ಕಾರ ಹಾಗೂ ಕೇಂದ್ರದ ಮೇಲೆ ಒತ್ತಡ ಹಾಕುವ ಯೋಜನೆ ಸರ್ಕಾರಕ್ಕೆ ಇದೆಯೇ ?